# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ:21.05.2022 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.17 (ಜೆ ಪಿ ಪಾರ್ಕ್) ರಲ್ಲಿ ಶ್ರೀ. ವೆಂಕಟೇಶ್ (ಕಾರ್ಯಪಾಲಕ ಅಭಿಯಂತರರು, ಟಿವಿಸಿಸಿ) ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಹಾಜರಿದ್ದವರು:-

| ಕ್ರಮ ಸಂಖ್ಯೆ | ಅಧ್ಯಕ್ಷರು / ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ ವೆಂಕಟೇಶ್ | ವಾರ್ಡ್ ನೋಡಲ್ ಅಧಿಕಾರಿಗಳು |
| 2 | ಶ್ರೀ ಎನ್. ಜಿ. ಉಮೇಶ್ | ಸಹಾಯಕ ಅಭಿಯಂತರರು |
| 4 | ಕಿರಣ್ ಕುಮಾರ್ | ವೈದ್ಯಾಧಿಕಾರಿಗಳು |
| 5 | ರಮೇಶ್ | ಹಿ. ಆ. ಪ. |
| 6 | ಸೋಮಶೇಖರ್ | ಕಿ. ಆ. ಪ. |
| 7 | ಬಸವರಾಜು | ಕಂದಾಯ ವಸೂಲಿಗಾರರು |
| 8 | ಚೇತನ್ ಕುಮಾರ್ | ಜಲ ಪರಿವೀಕ್ಷಕರು, ಬಿಡಬ್ಲ್ಯೂಎಸ್‌ಎಸ್‌ಬಿ |
| 9 | ಶಿವಮ್ಮ | ಲಿಂಕ್ ವರ್ಕರ್ |
| 10 | ಜಯಲಕ್ಷ್ಮೀ | ಲಿಂಕ್ ವರ್ಕರ್ |
| | ಹಾಗೂ ಇತರೆ ಸಾರ್ವಜನಿಕರು ಹಾಜರಿದ್ದರು | |

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

**1. ಬಿಡಬ್ಲ್ಯೂಎಸ್‌ಎಸ್‌ಬಿ ಇಲಾಖೆ:-**

ಬೃಂದಾವನಗರ, ಎಸ್. ಬಿ.ಎಂ. ಕಾಲೋನಿಯ 6ನೇ ಅಡ್ಡರಸ್ತೆಯಲ್ಲಿ ಒಳ ಚರಂಡಿಯ ವ್ಯವಸ್ಥೆ ಸರಿಇಲ್ಲದ ಕಾರಣ ಸ್ಯಾನಿಟರಿ ನೀರು ರಸ್ತೆಗೆ ಹರಿದುಬರುತ್ತಿರುತ್ತದೆ. ಸೂಕ್ತ ಕ್ರಮ ಕೈಗೊಳ್ಳುವಂತೆ ಬಿಡಬ್ಲ್ಯೂಎಸ್‌ಎಸ್‌ಬಿ ರವರಿಗೆ ತಿಳಿಸಲಾಯಿತು.

**2) ಪ್ರಾಥಮಿಕ ಆರೋಗ್ಯ ಕೇಂದ್ರ:**

ಕೋವಿಡ್ ಹೆಚ್ಚಾಗುತ್ತಿರುವ ಕಾರಣ ಆಸ್ಪತ್ರೆಯಲ್ಲಿ ಸಾಕಷ್ಟು ಔಷಧಿಗಳ ವ್ಯವಸ್ಥೆಯನ್ನು ಮಾಡಿಕೊಳ್ಳುವಂತೆ ಹಾಗೂ ಕೋವಿಡ್ ಬಗ್ಗೆ ಸೂಕ್ತ ಅರಿವನ್ನು ಜನರಲ್ಲಿ ಮೂಡಿಸುವಂತೆ ವೈದ್ಯಾಧಿಕಾರಿಗಳಿಗೆ ತಿಳಿಸಿದರು.

3. ಬಿಬಿಎಂಪಿ ಅರಣ್ಯ ಇಲಾಖೆ:

ಮತ್ತಿಕೆರೆ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ವಾರ್ಡ್-17ರ ವ್ಯಾಪ್ತಿಯಲ್ಲಿ ಕೆಲವೊಂದು ಹಳೆಯ ಮರಗಳಿದ್ದು, ಬೀಳುವ ಹಂತದಲ್ಲಿರುತ್ತದೆ. ಇಂತಹ ಮರಗಳನ್ನು ಹಾಗೂ ಮರದ ರೆಂಬೆಗಳನ್ನು ತೆರವುಗೊಳಿಸಲು ಸಂಬಂಧಪಟ್ಟ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಇವರಿಗೆ ದೂರವಾಣಿ ಮುಖೇನ ತಿಳಿಸಿದರು.

4) ಬೆಸ್ಕಾಂ :

ವಾರ್ಡ್ ವ್ಯಾಪ್ತಿಯಲ್ಲಿ ಬರುವ ಕೋವಿಡ್ ಆಸ್ಪತ್ರೆ, ಜಿಮ್ ಕಟ್ಟಡ, ವಾರ್ಡ್ ಕಛೇರಿಗಳ ಬಿಲ್ಲುಗಳನ್ನು ಪಾವತಿಸಲು ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಕಿರಿಯ ಅಭಿಯಂತರರು ತಿಳಿಸಿದರು. ಅದರಂತೆ, ನೋಡಲ್ ಅಧಿಕಾರಿಗಳು ಮಾತನಾಡಿ, ಸಂಬಂಧಪಟ್ಟ ಅದಿಕಾರಿಗಳಿಗೆ ಕೂಡಲೇ ಬಿಲ್ಲುಗಳನ್ನು ಪಾವತಿಸಲು ಸೂಚಿಸಿದರು.

5) ಮಾಸ್ಕ್ ಹಾಕದಿರುವ ವ್ಯಕ್ತಿಗಳಿಗೆ ದಂಡ ವಿಧಿಸುವ ಬಗ್ಗೆ:-

ಅಧ್ಯಕ್ಷರು ಮಾತನಾಡಿ, ವಾರ್ಡ್‌ನಲ್ಲಿ ಮಾರ್ಷಲ್‌ಗಳು ಸಾರ್ವಜನಕರಲ್ಲಿ ಮಾಸ್ಕ್ ಹಾಕುವಂತೆ ಜಾಗೃತಿ ಮೂಡಿಸಲು ಸೂಚಿಸಲಾಯಿತು.

ಕೊನೆಯದಾಗಿ ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸಮಸ್ಯೆ / ದೂರುಗಳನ್ನು ದಾಖಲಿಸಲು ವಾರ್ಡ್‌ನಲ್ಲಿ ದೂರು ದಾಖಲಿಸುವ ಪುಸ್ತಕ ಲಭ್ಯವಿರುವಂತೆ ನೋಡಿಕೊಂಡು ಬರುವ ದೂರುಗಳನ್ನು ಆದ್ಯತೆಯ ಮೇರೆಗೆ ಕ್ರಮವಹಿಸುವಂತೆ ಹಾಗೂ ಪ್ರತಿ ವಾರ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಮುಂದುವರೆಸುಂತೆ ಸೂಚಿಸುತ್ತಾ, ಸಕಾಲದಲ್ಲಿ ಸಾರ್ವಜನಿಕ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ಕೈಗೊಂಡು ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Hema S.T
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:17

(ವೆಂಕಟೇಶ್)
ಕಾರ್ಯಪಾಲಕ ಅಭಿಯಂತರರು ಹಾಗೂ
ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:17